ಏಪ್ಪೋರ್ಟ್ ತ್ಯಾಜ್ಯದಿಂದ ಶಕ್ತಿ ಉತ್ಪಾದನೆ ಚರ್ಚೆ

ಫೇರ್‌ಫ್ಯಾಕ್ಸ್‌ ಫೈನಾನ್ಷಿಯಲ್ ಸಂಸ್ಥಾಪಕ ಪ್ರೇಮ್ ವತ್ಸ ಭೇಟಿಯಾದ ಎಸ್.ಈ. ಸುಧೀಂದ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಎಸ್.ಈ.ಸುಧೀಂದ್ರ ಅವರು ಫೇರ್‌ಫ್ಯಾಕ್ಸ್ ಫೈನಾನ್ಷಿಯಲ್ ಹೋಲ್ಡಿಂಗ್ಸ್ ಲಿಮಿಟೆಡ್‌ನ ಸಂಸ್ಥಾಪಕ, ಅಧ್ಯಕ್ಷ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮಶ್ರೀ ವಿ.ಪ್ರೇಮ್ ವತ್ಸ ಅವರನ್ನು ಭೇಟಿಯಾಗಿ, ಜೈವಿಕ ಇಂಧನ, ತ್ಯಾಜ್ಯದಿಂದ ಇಂಧನ, ವಿಮಾನ ನಿಲ್ದಾಣ ಮೂಲಸೌಕರ್ಯಕ್ಕೆ ಸುಸ್ಥಿರ ಇಂಧನ ಪರಿಹಾರಗಳು ಹಾಗೂ ವೃತ್ತಾಕಾರದ ಆರ್ಥಿಕತೆಯ ಮಾದರಿಗಳ ಕುರಿತು ಸಹಯೋಗದ ಸಾಧ್ಯತೆಗಳ ಬಗ್ಗೆ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ನೂತನ ಜೈವಿಕ ಇಂಧನ ನೀತಿ ರಚನೆ, ಜೈವಿಕ ಇಂಧನ ಕ್ಷೇತ್ರದಲ್ಲಿನ ಉದ್ದೇಶಿತ ಬಂಡವಾಳ ಹೂಡಿಕೆ ಪೂರಕ ವಾತಾವರಣ ಕುರಿತು ಸುಧೀಂದ್ರ ಅವರು ವಿವರಿಸಿದರು.

ರಾಜ್ಯದಲ್ಲಿ ವಿವಿಧ ರೀತಿಯ ಕಚ್ಚಾ ವಸ್ತುಗಳು ಹಾಗೂ ಜೈವಿಕ ಸಂಪನ್ಮೂಲಗಳನ್ನು ಬಳಸಿಕೊಂಡು ಜೈವಿಕ ಇಂಧನದ ಉತ್ಪಾದನೆ ಮತ್ತು ಬಳಕೆಯನ್ನು ಉತ್ತೇಜಿಸಲು ಕೈಗೊಳ್ಳಲಾಗುತ್ತಿರುವ ವಿವಿಧ ಕಾರ್ಯಯೋಜನೆಗಳ ಕುರಿತು ಪ್ರೇಮ್ ವತ್ಸ ಅವರಿಗೆ ವಿವರಿಸಿದರು. ಮುಖ್ಯವಾಗಿ ಸುಸ್ಥಿರ ಜೈವಿಕ ಸಂಪನ್ಮೂಲ ಬಳಕೆ, ಕಂಪ್ರೆಸ್ಡ್ ಬಯೋ ಗ್ಯಾಸ್, ಬಯೋ ಡೀಸೆಲ್, ಇತರೆ ಜೈವಿಕ ಇಂಧನಗಳು ಹಾಗೂ ನವೀಕರಿಸಬಹುದಾದ ಇಂಧನ ಪರಿಹಾರಗಳ ಕುರಿತು ಮಾಹಿತಿ ನೀಡಿದರು. ವಿಮಾನ ನಿಲ್ದಾಣಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ನಿರ್ವಹಿಸಿ,



ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್.ಈ.ಸುಧೀಂದ್ರ ಅವರು ಫೇರ್‌ಫ್ಯಾಕ್ಸ್ ಫೈನಾನ್ಷಿಯಲ್ ಹೋಲ್ಡಿಂಗ್ಸ್ ಲಿಮಿಟೆಡ್‌ನ ಸಂಸ್ಥಾಪಕ, ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮಶ್ರೀ ವಿ.ಪ್ರೇಮ್ ವತ್ಸ ಅವರನ್ನು ಭೇಟಿಯಾಗಿ ಚರ್ಚಿಸಿದರು.

ಆದರಲ್ಲಿ ಸೂಕ್ತವಾದ ಸಾವಯವ ಹಾಗೂ ಇತರೆ ತ್ಯಾಜ್ಯ ವಸ್ತುಗಳನ್ನು ಶಕ್ತಿ ಉತ್ಪಾದನೆಗೆ ಪರಿವರ್ತಿಸುವ ಯೋಜನೆಗಳ ಸಾಧ್ಯತೆಗಳ ಬಗ್ಗೆಯೂ ಚರ್ಚಿಸಲಾಯಿತು. ಇಂತಹ ಯೋಜನೆಗಳು ಭೂಮಿಗೆ ತುಂಬುವ ತ್ಯಾಜ್ಯದ ಪ್ರಮಾಣವನ್ನು ಕಡಿಮೆ ಮಾಡುವುದರ ಜೊತೆಗೆ ಸಂಪನ್ಮೂಲಗಳ ಸಮರ್ಪಕ ಬಳಕೆ, ಇಂಧನ ಮರುಪಡೆಯುವಿಕೆ ಹಾಗೂ ಪರಿಸರ ಸ್ನೇಹಿ ವಿಮಾನ ನಿಲ್ದಾಣಗಳ ಅಭಿವೃದ್ಧಿಗೆ ಸಹಕಾರಿಯಾಗಲಿವೆ ಎಂದು ಚರ್ಚೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು. ಈ ವಿಚಾರ ವಿನಿಮಯ ಚರ್ಚೆಯಲ್ಲಿ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದ ಉಪಕುಲಪತಿ ಫಾದರ್ ವಿಕ್ಟರ್ ಲೋಬೋ ಹಾಗೂ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದ ಪ್ರೊ-ವೈಸ್ ಚಾನ್ಸಲರ್, ಡ್ಯಾನ್ಸಿಲ್ ಲೋಬೋ ಉಪಸ್ಥಿತರಿದ್ದರು.